# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2021-22 ದಿನಾಂಕ : 17-07-2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:01-08-2021 ರಂದು ವಾರ್ಡ್ ನಂ.196-ಅಂಜನಾಪುರ ಕೋವಿಡ್ ವಾರ್ ರೂಂ ಕಛೇರಿಯ ಉದ್ಯಾನವನದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

## ಸಭೆಗೆ ಹಾಜರಾಗಿದ್ದವರ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಪ್ರಮೋದ್ ಕುಮಾರ್.ಎನ್.ಜಿ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ನರೇಂದ್ರ ಕುಮಾರ್.ಎ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ನರೇಶ್.ಬಿ.ಎಸ್ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 4 | ಶ್ರೀ ಯೋಗೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ. |
| 6 | ಶ್ರೀ ಕೃಷ್ಣಾ ನಾಯಕ್ | ಸಹಾಯಕ ಇಂಜಿನಿಯರ್ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) | ಹಾಜರಿರುತ್ತಾರೆ. |
| 7 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 8 | ಶ್ರೀ ಸದಾನಂದ | ಕಂದಾಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 9 | ಶ್ರೀ ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ. |
| 10 | | ಪೋಲೀಸ್ ಇಲಾಖೆ | ಗೈರು ಹಾಜರಿರುತ್ತಾರೆ. |
| 11 | | ತೋಟಗಾರಿಕೆ ಅಧಿಕಾರಿಗಳು | ಗೈರು ಹಾಜರಿರುತ್ತಾರೆ. |
| 12 | ಶ್ರೀ ರಮೇಶ್ | ಬೀದಿ ದೀಪಗಳ ನಿರ್ವಹಣೆ | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.196ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಪ್ರಮೋದ್ ಕುಮಾರ್.ಎನ್.ಜಿ ರವರು ದಿನಾಂಕ: 01-08-2021 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ನರೇಂದ್ರ ಕುಮಾರ್.ಎ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

Scanned with CamScanner

1. ಕೋವಿಡ್-19 3ನೇ ಅಲೆ:-

ಕೋವಿಡ್-19 3ನೇ ಅಲೆ ವ್ಯಾಪಕವಾಗಿ ಹರಡುವುದನ್ನು ತಡೆದಗಟ್ಟುವ ಬಗ್ಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು ಸಾರ್ವಜನಿಕರು ಗುಂಪ್ಪಾಗಿ ಸೇರಿವುದನ್ನು ತಡೆಗಟ್ಟಿ ಮಾಸ್ಕ್‌ಗಳನ್ನು ಸರಿಯಾಗಿ ಧರಿಸುವುದರ ಬಗ್ಗೆ ಕ್ರಮ ಕೈಗೊಳ್ಳಲು ಮಾರ್ಶಲ್‌ಗಳಿಗೆ ಸೂಚಿಸಿರುತ್ತಾರೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ Covishield and Covaxin ಪ್ರತಿದಿನ ಲಸಿಕೆ ನೀಡುವ ಬಗ್ಗೆ ತಿಳಿಸಲಾಯಿತು.

2. ಬೀದಿ ದೀಪಗಳ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ನಿರ್ವಹಣೆಯಲ್ಲಿ ಸರಿಯಾಗಿ ನಿರ್ವಹಿಸುತ್ತಿದ್ದು ಸದರಿ ನಿರ್ವಹಣೆಯಲ್ಲಿ ಯಾವುದೇ ಅಡಚಣೆಯಾಗದಂತೆ ಸಂಜೆ ವೇಳೆಯಲ್ಲಿ ಬೀದಿ ದೀಪಗಳನ್ನು ಹೊತ್ತಿಸಲಾಗುತ್ತಿದೆ. ಸದರಿ ವಾರ್ಡ್ ವ್ಯಾಪ್ತಿಯಲ್ಲಿ ಅಂಜನಾಪುರ, ಕೆಂಬತ್ತಹಳ್ಳಿ ಮುಖ್ಯ ರಸ್ತೆ ಗಾಳಿ ಮತ್ತು ಮಳೇಯಿಂದ ಬಹಳ ತೊಂದರೆ ಉಂಟಾಗುತ್ತಿದ್ದು ಇದನ್ನು ಸರಿಪಡಿಸಲಾಗುವುದು. ಬೀದಿ ದೀಪಗಳಿಗೆ ಸಂಬಂಧಪಟ್ಟಂತೆ ಸಭೆಗೆ ಆಗಮಿಸಿದ ಅಧಿಕಾರಿಗಳ ಪ್ರತಿನಿಧಿಗಳು ಸದರಿ ಮುಂಬರುವ ದೂರಿನ ವಿಷಯವಾಗಿ ಬೀದಿ ದೀಪಗಳ ನಿರ್ವಹಣೆಯನ್ನು ವ್ಯವಸ್ಥಿತವಾಗಿ ಸರಿಪಡಿಸಲಾಗುತ್ತದೆ ಎಂದು ಈ ಸಭೆಯಲ್ಲಿ ತಿಳಿಸಿರುತ್ತಾರೆ.

3. ಘನತ್ಯಾಜ್ಯ ನಿರ್ವಹಣೆ:-

ಕೋವಿಡ್-19ರ ಲಾಕ್‌ಡೌನ್ ಮುಕ್ತಾಯಗೊಂಡ ಪ್ರಯುಕ್ತ ಪೌರಕಾರ್ಮಿಕರು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಕಸದ ಸಂಗ್ರಹಣೆಯನ್ನು ಸರ್ಮಪಕವಾಗಿ ನಿರ್ವಹಿಸಲಾಗುವುದು ಮತ್ತು ಮುಂದಿನ ದಿನಗಳಲ್ಲಿ ಕೂಡ ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಾಗೂ ಘನತ್ಯಾಜ್ಯ ನಿರ್ವಹಣೆಯಲ್ಲಿ ಯಾವುದೇ ದೂರು ಬಾರದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿರುತ್ತಾರೆ.

4. ಉದ್ಯಾನವನ ನಿರ್ವಹಣೆ:-

ಆವಲಹಳ್ಳಿ ಮುಖ್ಯ ರಸ್ತೆಯಲ್ಲಿನ ಹೈಟೆಂಷನ್ ಕೆಳಭಾಗದ ಉದ್ಯಾನವನವು ಅಭಿವೃದ್ಧಿಗೊಂಡಿರುವುದು ಸರಿಯಷ್ಠೆ. ಆದರೆ ಸದರಿ ಉದ್ಯಾನವನದಲ್ಲಿ ಯಾವುದೇ ನಿರ್ವಹಣೆ ಕೈಗೊಳ್ಳೇದೆ ಪೊದೆಗಳು/ಕಳೆ ಗಿಡಗಳು ಉದ್ಯಾನವನದ ಎಲ್ಲಾ ಭಾಗಗಳಲ್ಲಿ ಹಾಗೂ ಪಾದಚಾರಿ ಮಾರ್ಗಗಳಲ್ಲೂ ಸಹ ಬೇಳೆದಿರುತ್ತದೆ ಆದ್ದರಿಂದ ಸದರಿ ಉದ್ಯಾನವವವನ್ನು ಸಾರ್ವಜನಿಕರು ಉಪಯೋಗಿಸುತ್ತಿರುವುದಿಲ್ಲ ಆದ್ದರಿಂದ ಸದರಿ ಉದ್ಯಾನವನದಲ್ಲಿನ ಪೊದೆಗಳು/ಕಳೆ ಗಿಡಗಳನ್ನು ತೆರವುಗೊಳಿಸಿ ಸಾರ್ವಜನಿಕರು ಉದ್ಯಾನವನವನ್ನು ಬಳಸುಲು ಅನುಕೂಲವಾಗುಂತೆ ಕ್ರಮಕೈಗೊಳ್ಳಲು ತೋಟಗಾರಿಕೆ ಅಧೀಕ್ಷಕರಿಗೆ ಸೂಚಿಸಲಾಯಿತು.

6.ನೋಡಲ್ ಅಧಿಕಾರಿ:-

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಪ್ರಮೋದ್ ಕುಮಾರ್ ರವರು ಅದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.196 ಅಂಜನಾಪುರ

-ಸಹಿ-
ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.196 ಅಂಜನಾಪುರ

Scanned with CamScanner